ಲಕ್ಷಗಳನ್ನು ನಿಗದಿಪಡಿಸಿದ್ದು, ಈಗಾಗಲೇ ರೂ 43 89 ಲಕ್ಷಗಳನ್ನು ಬಿಡುಗಡೆಗೊಳಿಸಲಾಗಿದೆ ಲೆಕ್ಕ ಶೀರ್ಷಿಕೆ – 3054 ರಡಿ ಗ್ರಾಮೀಣ ರಸ್ತೆಗಳ ನಿರ್ವಹಣೆ/ಅಭಿವೃದ್ಧಿಗಾಗಿ ರೂ 71 98 ಲಕ್ಷಗಳನ್ನು ಒದಗಿಸಲಾಗಿದೆ

1635 (2107) ಶ್ರೀ ಶಿವಶಂಕರ್‌ರೆಡ್ಡಿ ಎನ್ ಹೆಚ್ (ಗೌರಿಬಿದನೂರು) – ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದ್ಯಾಂತ ಸರ್ಕಾರಿ ಶಾಲೆಗಳಲ್ಲಿ ವ್ಯಾಸಂಗ ಮಾಡುವ ಬಡ ವಿದ್ಯಾರ್ಥಿಗಳಿಗೆ ಒದಗಿಸುತ್ತಿರುವ ಬಿಸಿ ಊಟವನ್ನು ತಿಂದು ತೀವ್ರ ರೀತಿಯಲ್ಲಿ ಅಸ್ವಸ್ಥಗೊಂಡ ಮಕ್ಕಳ ಸ್ಥಿತಿಯು ಚಿಂತಾಜನಕವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದ್ದರೂ ಸಹ ತಪ್ಪಿತಸ್ಥ ಶಿಕ್ಷಕರ ವಿರುದ್ಧ ಯಾವುದೇ ಕ್ರಮ ಕೈಗೊಳ್ಳದೇ ಇರಲು ಕಾರಣವೇನು,

ಆ) ಗೌರಿಬಿದನೂರು ತಾಲ್ಲೂಕಿನ ಈ ಊಟದ ವ್ಯವಸ್ಥೆಯಿಂದ ಅಸ್ವಸ್ಥಗೊಂಡ ಮಕ್ಕಳ/ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ಹಾಗೂ ಇವರ ಚಿಕಿತ್ಸೆಗಾಗಿ ಸರ್ಕಾರವು ಕೈಗೊಂಡಿರುವ ಕ್ರಮವೇನು,

ಇ) ಮಕ್ಕಳ ಊಟದ ಕಾರ್ಯಕ್ರಮದಲ್ಲಿ ಈ ರೀತಿಯ ಊಟದ ವ್ಯವಸ್ಥೆಯನ್ನು ತಡೆಗಟ್ಟಲು ಸರ್ಕಾರವು ಕೈಗೊಂಡಿರುವ ಕ್ರಮವೇನು?

ಶ್ರೀ ಬಸವರಾಜ ಎಸ್ ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ಅಕ್ಷರ ದಾಸೋಹ ಕಾರ್ಯಕ್ರಮದಡಿ ರಾಜ್ಯದಲ್ಲಿ ಒಟ್ಟು 34 ಶಾಲೆಗಳ 1242 ಮಕ್ಕಳು ಅಸ್ವಸ್ಥಗೊಂಡಿದ್ದ ವರದಿಗಳು ಬಂದಿವೆ ಬಿಸಿಯೂಟ ಮಾಡಿದ ಮಕ್ಕಳು ಅಸ್ವಸ್ಥತೆ ಹೊಂದಿದ್ದ ಅಡುಗೆ ಕೇಂದ್ರಗಳಲ್ಲಿನ ಅಡುಗೆಯವರನ್ನು ಬದಲಿಸಿ ಪರ್ಯಾಯ ವ್ಯವಸ್ಥೆಯನ್ನು ಮಾಡಲಾಗಿದೆ

ಆ) ಗೌರಿಬಿದನೂರು ತಾಲ್ಲೂಕಿನಲ್ಲಿ ಯಾವುದೇ ಅಸ್ವಸ್ಥತೆ ಪ್ರಕರಣಗಳು ವರದಿಯಾಗಿರುವುದಿಲ್ಲ

ಇ) * ಉತ್ತಮ ಗುಣಮಟ್ಟದ ಆಹಾರ ಧಾನ್ಯಗಳನ್ನು ಸರಬರಾಜು ಮಾಡಲು ಭಾರತ ಆಹಾರ ನಿಗಮ ಮತ್ತು ಕರ್ನಾಟಕ ಆಹಾರ ಮತ್ತು ನಾಗರೀಕ ಸರಬರಾಜು ನಿಗಮಗಳಿಗೆ ನಿರ್ದೇಶನ ನೀಡಲಾಗಿದೆ

* ಅಡುಗೆ ತಯಾರಿಕಾ ಹಾಗೂ ಬಡಿಸುವ ಮೇಲ್ವಿಚಾರಣೆಯನ್ನು ಶಾಲಾಭಿವೃದ್ಧಿ ಮತ್ತು ಮೇಲ್ವಿಚಾರಣಾ ಸಮಿತಿಗಳಿಗೆ ವಹಿಸಲಾಗಿದೆ

* ಮಕ್ಕಳಿಗೆ ಸರಿಯಾದ ಕ್ರಮದಲ್ಲಿ ಬಿಸಿಯೂಟ ತಯಾರಿಕೆ ಹಾಗೂ ಮೇಲ್ವಿಚಾರಣೆಯನ್ನು ನಡೆಸಲು ಶಾಲಾ ಹಂತದಲ್ಲಿ ತಾಯಂದಿರ ಸಮಿತಿಯನ್ನು ರಚಿಸಲಾಗಿದೆ

* ಉತ್ತಮ ಗುಣಮಟ್ಟದ ಆಹಾರ ಧಾನ್ಯಗಳ ಸರಬರಾಜು ಖಚಿತ ಪಡಿಸಿಕೊಳ್ಳಲು ಉಪನಿರ್ದೇಶಕರು (ಆಹಾರ) ಇವರ ನೇತೃತ್ವದಲ್ಲಿ ಜಿಲ್ಲಾ ಮಟ್ಟದ ಸಮಿತಿಯನ್ನು ರಚಿಸಲಾಗಿದೆ

* ಮಕ್ಕಳಿಗೆ ಬಿಸಿಯೂಟ ಬಡಿಸುವ ಮುಂಚಿತವಾಗಿ ಶಿಕ್ಷಕರು ರುಚಿ ನೋಡಿದ ನಂತರವೇ ಮಕ್ಕಳಿಗೆ ನೀಡುವ ಬಗ್ಗೆ ನಿರ್ದೇಶನ ನೀಡಲಾಗಿದೆ

* ಜಿಲ್ಲಾ ಹಾಗೂ ರಾಜ್ಯ ಮಟ್ಟದಲ್ಲಿ ಚಾಲನಾ ಹಾಗೂ ಪರಾಮರ್ಶೆ ಸಮಿತಿಯನ್ನು ರಚಿಸಲಾಗಿದೆ

* ಅಕ್ಷರ ದಾಸೋಹ ಕಾರ್ಯಕ್ರಮವನ್ನು ವಿವಿಧ ಇಲಾಖೆಗಳಾದ ಆರೋಗ್ಯ, ಆಹಾರ ಮತ್ತು ನಾಗರೀಕ ಸರಬರಾಜು, ಕಂದಾಯ, ಗ್ರಾಮೀಣಾಭಿವೃದ್ಧಿ ಇಲಾಖೆಗಳ ಸಹಯೋಗದೊಂದಿಗೆ ಅನುಷ್ಠಾನಗೊಳಿಸಲಾಗುತ್ತಿದೆ

* ಅಡುಗೆ ತಯಾರಿಸಲು ಅನಿಲ ಬಳಕೆ ಮಾಡಲಾಗುತ್ತಿದೆ

* ಅಡಿಗೆ ಸಿಬ್ಬಂದಿಗೆ ಈಗಾಗಲೇ ಒಂದು ಬಾರಿ ತರಬೇತಿ ನೀಡಿದ್ದು, ಮತ್ತೊಮ್ಮೆ ತರಬೇತಿ ನೀಡಲು ಕ್ರಮ ತೆಗೆದುಕೊಳ್ಳಲಾಗುತ್ತಿದೆ